ನಿ=330 = 1
13/12/2024

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ. ತಳವಾರ ಸಾಬಣ್ಣ ಇವರು ಮಂಡಿಸಿರುವ ನಿಯಮ 330ರ ಗಮನ ಸೆಳೆಯುವ ಸೂಚನೆಗೆ ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ಸಚಿವರ ಉತ್ತರ**

**ವಿಷಯ:** "ಅತ್ಯಂತ ಹಿಂದುಳಿದ ಜಾತಿಗಳನ್ನು ಒಳಗೊಂಡ ಪ್ರವರ್ಗ-1 ಗುಂಪಿಗೆ ಜನಸಂಖ್ಯೆ, ಆರ್ಥಿಕ-ಸಾಮಾಜಿಕ-ಶೈಕ್ಷಣಿಕ ಹಿನ್ನೆಲೆ ಪರಿಗಣಿಸದೇ ಅವೈಜ್ಞಾನಿಕವಾಗಿ ಮೀಸಲಾತಿ ಪ್ರಮಾಣವನ್ನು ನಿಗದಿಪಡಿಸಿರುವುದು ಮತ್ತು ಅದರಿಂದ ತೀರಾ ಹಿಂದುಳಿದ ಜಾತಿಗಳಿಗೆ ಮೂವತ್ತು ವರ್ಷಗಳಿಂದ ಆಗುತ್ತಿರುವ ಅನ್ಯಾಯದ ಕುರಿತು ನಿಯಮ 330ರ ಮೇರೆಗೆ ಸದನದಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ".

**ಉತ್ತರ:**

ಮಂಡಲ್ ವರದಿಗೆ ಸಂಬಂಧಿಸಿದಂತೆ ಮಾನ್ಯ ಘನ ಸರ್ವೋಚ್ಚ ನ್ಯಾಯಾಲಯವು ದಿನಾಂಕ:16.11.1992 ರಲ್ಲಿ ನೀಡಿರುವ ತೀರ್ಪಿನಂತೆ ಪ್ರತಿಯೊಂದು ರಾಜ್ಯದಲ್ಲೂ ಶಾಶ್ವತವಾಗಿ ಹಿಂದುಳಿದ ವರ್ಗಗಳ ಆಯೋಗ ರಚನೆಯಾಗಬೇಕು ಎಂಬುದಾಗಿ ಆದೇಶಿಸಿದೆ. ಅದಕ್ಕನುಗುಣವಾಗಿ ಕರ್ನಾಟಕದಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಅಧಿನಿಯಮ, 1995 ರಂತೆ, ಸರ್ಕಾರದ ಅಧಿಸೂಚನೆ ಸಂಖ್ಯೆ: ಎಸ್ ಡಬ್ಲ್ಯೂಡಿ 164 ಬಿಸಿಎ 97 ದಿನಾಂಕ:29.11.1997 ರನ್ವಯ ದಿನಾಂಕ:01.12.1997ರಂದು ಜಾರಿಗೆ ಬಂದಿರುತ್ತದೆ. ಸದರಿ ಅಧಿನಿಯಮದ ಕಲಂ 9 ರ ಅಡಿಯಲ್ಲಿ ಆಯೋಗದ ಪ್ರಕಾರ್ಯಗಳ ಬಗ್ಗೆ ನಮೂದಿಸಿದ್ದು, ಅದರಂತೆ ಆಯೋಗವು ಕಾರ್ಯನಿರ್ವಹಿಸುತ್ತಿದೆ.

ಪ್ರಸ್ತುತ, ಕರ್ನಾಟಕ ಹಿಂದಿನ ಮೈಸೂರು ರಾಜ್ಯದಲ್ಲಿ ಹಿಂದುಳಿದ ವರ್ಗಗಳನ್ನು ಗುರುತಿಸಲು ಅಂದಿನ ಸರ್ಕಾರಗಳು ಹಿಂದುಳಿದ ವರ್ಗಗಳ ಸಮಿತಿಗಳನ್ನು ರಚಿಸಿದ್ದು, ಈ ಸಮಿತಿಗಳು ಹಿಂದುಳಿದ ವರ್ಗಗಳನ್ನು ವೈಜ್ಞಾನಿಕವಾಗಿ ಗುರುತಿಸಿ ಮತ್ತು ವೈಜ್ಞಾನಿಕವಾಗಿ ಹಿಂದುಳಿದ ವರ್ಗಗಳನ್ನು ವರ್ಗೀಕರಿಸಲು ಸಾಮಾಜಿಕ, ಶೈಕ್ಷಣಿಕ, ಔದ್ಯೋಗಿಕ ಹಾಗೂ ಆರ್ಥಿಕ ಅಂಶಗಳ ಮೇಲೆ ವಿವಿಧ ಮಾನದಂಡಗಳನ್ನು ರೂಪಿಸಿ ಸರ್ಕಾರಕ್ಕೆ ವರದಿಗಳನ್ನು ಸಲ್ಲಿಸಿರುತ್ತವೆ.

ಶ್ರೀ ಎಲ್.ಜಿ. ಹಾವನೂರು ನೇತೃತ್ವದ ಪ್ರಥಮ ಕರ್ನಾಟಕ ಹಿಂದುಳಿದ ವರ್ಗಗಳ ಆಯೋಗವು ರಾಜ್ಯದಲ್ಲಿನ ಹಿಂದುಳಿದ ವರ್ಗಗಳನ್ನು ಹಿಂದುಳಿದ ಸಮುದಾಯ, ಹಿಂದುಳಿದ ಜಾತಿ, ಹಿಂದುಳಿದ ಬುಡಕಟ್ಟು ಮತ್ತು ವಿಶೇಷ ಗುಂಪು ಎಂದು ವರ್ಗೀಕರಿಸಿರುತ್ತದೆ. ಹಿಂದುಳಿದ ಸಮುದಾಯ, ಹಿಂದುಳಿದ ಜಾತಿ ಅಥವಾ ಹಿಂದುಳಿದ ಬುಡಕಟ್ಟಿಗೆ ಸೇರಿದ ಮತ್ತು ಯಾರ ಕುಟುಂಬ ಆದಾಯವು ವಾರ್ಷಿಕ ರೂ.10,000/-ಗಳನ್ನು ಅಥವಾ ಅದಕ್ಕೂ ಕಡಿಮೆ ಇದೆಯೊ ಆ ಅಭ್ಯರ್ಥಿಯು ಸಂದರ್ಭಾನುಸಾರ ಈ ಸಮುದಾಯಗಳು, ಜಾತಿಗಳು

ಅಥವಾ ಬುಡಕಟ್ಟುಗಳಿಗೆ ಮೀಸಲಿಟ್ಟಿರುವ ಖಾಲಿ ಹುದ್ದೆಗಳಿಗೆ ಪರಿಗಣಿತನಾಗಲು ಅರ್ಹನಾಗಿರುತ್ತಾನೆ. ಸರ್ಕಾರದ ಆದೇಶ ಸಂಖ್ಯೆ: SWL 123 BCA 79 dated 01.05.1979 ರಲ್ಲಿ ಆದೇಶ ಹೊರಡಿಸಲಾಗಿದ್ದು, ಸದರಿ ಆದೇಶದಲ್ಲಿ ಮೀಸಲಾತಿ ಪ್ರಮಾಣವು ಈ ಕೆಳಕಂಡಂತಿರುತ್ತದೆ.

| ವರ್ಗೀಕರಣ | ಮೀಸಲಾತಿ ಪ್ರಮಾಣ (ಶೇಕಡವಾರು) | |
|---|---|---|
| | ಶಿಕ್ಷಣಕ್ಕಾಗಿ 15 (4) | ಉದ್ಯೋಗಕ್ಕಾಗಿ 16 (4) |
| ಹಿಂದುಳಿದ ಸಮುದಾಯ | 18 % | 20% |
| ಹಿಂದುಳಿದ ಜಾತಿ | 10 % | 10 % |
| ಹಿಂದುಳಿದ ಬುಡಕಟ್ಟು | 5 % | 5 % |
| ವಿಶೇಷ ಗುಂಪು | 5 % | 5 % |
| ಒಟ್ಟು | 38 % | 40 % |

ನ್ಯಾಯಮೂರ್ತಿ ಓ. ಚಿನ್ನಪ್ಪ ರೆಡ್ಡಿ ನೇತೃತ್ವದ ಹಿಂದುಳಿದ ವರ್ಗಗಳ ಆಯೋಗವು ರಾಜ್ಯದಲ್ಲಿನ ಹಿಂದುಳಿದ ವರ್ಗಗಳನ್ನು ಭಾರತ ಸಂವಿಧಾನದ ಅನುಚ್ಛೇಧ 15 (4) ಮತ್ತು 16 (4) ರ ಅಡಿಯಲ್ಲಿ ಶಿಕ್ಷಣ ಮತ್ತು ಉದ್ಯೋಗಕ್ಕಾಗಿ ಪ್ರವರ್ಗವಾರು ವಿಂಗಡಿಸಿ ಸರ್ಕಾರಕ್ಕೆ 1994 ರಲ್ಲಿ ವರದಿಯನ್ನು ಸಲ್ಲಿಸಿರುತ್ತದೆ. ಸದರಿ ವರದಿಯಲ್ಲಿ ಪ್ರವರ್ಗ-1 ರಲ್ಲಿ ಬರುವ ಸಮುದಾಯಗಳನ್ನು ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ತೀರಾ ಹಿಂದುಳಿದ ವರ್ಗಗಳೆಂದು ಗುರುತಿಸುವ ಪೂರ್ವದಲ್ಲಿ ಆಯೋಗವು ಆಯ್ದ 525 ಗ್ರಾಮಗಳಲ್ಲಿ ಪರೀಕ್ಷಾರ್ಥ ಸಮೀಕ್ಷೆ ನಡೆಸಲಾಗಿರುತ್ತದೆ ಹಾಗೂ ಸರ್ಕಾರದ ವಿವಿಧ ಇಲಾಖೆಗಳು, ವಿಶ್ವವಿದ್ಯಾಲಯಗಳು, ಸ್ಥಳೀಯ ಸಂಸ್ಥೆಗಳು ಇತ್ಯಾದಿ ಮೂಲಗಳಿಂದ ಸಾಮಾಜಿಕ ಹಾಗೂ ಶೈಕ್ಷಣಿಕ ವಿಷಯಗಳಿಗೆ ಸಂಬಂಧಿಸಿದಂತೆ ಅಂಕಿ-ಅಂಶಗಳನ್ನು ಸಂಗ್ರಹಿಸಿ ವಿಶ್ಲೇಷಿಸಲಾಗಿರುತ್ತದೆ.

ಮುಂದುವರೆದು, ಹಿಂದುಳಿದ ವರ್ಗಗಳನ್ನು ಗುರುತಿಸುವಾಗ ಆಯೋಗವು ಆಯಾ ಜಾತಿ/ಸಮುದಾಯದ ಹಿಂದುಳಿದಿರುವಿಕೆ, ಸಮುದಾಯದ ಗಾತ್ರ ಮತ್ತು ಸಾಮಾಜಿಕ ಮತ್ತು ಶೈಕ್ಷಣಿಕವಾಗಿ ಹಿಂದುಳಿದಿರುವಿಕೆಯನ್ನು ಪರಿಗಣಿಸಿ ಪ್ರವರ್ಗ–I ರಲ್ಲಿ ಜಾತಿ/ಸಮುದಾಯಗಳನ್ನು ಗುರುತಿಸಲಾಗಿರುತ್ತದೆ. ಅದರಂತೆ, ನ್ಯಾಯಮೂರ್ತಿ ಓ ಚಿನ್ನಪ್ಪ ರೆಡ್ಡಿ ಆಯೋಗದ ವರದಿಯನ್ನಾಧರಿಸಿ ಶೈಕ್ಷಣಿಕ ಮತ್ತು ಉದ್ಯೋಗದ ಮೀಸಲಾತಿಗಾಗಿ ರಾಜ್ಯದಲ್ಲಿರುವ ಹಿಂದುಳಿದ ವರ್ಗಗಳನ್ನು ಪ್ರವರ್ಗ-I, ಪ್ರವರ್ಗ-II (ಎ), ಪ್ರವರ್ಗ-II(ಬಿ) ಪ್ರವರ್ಗ-III (ಎ) ಮತ್ತು ಪ್ರವರ್ಗ-III (ಬಿ) ಎಂದು ವರ್ಗೀಕರಿಸಿ ಸರ್ಕಾರದ ಆದೇಶ ಸಂಖ್ಯೆ: SWD 150 BCA 94 dated 17.09.1994 ರಲ್ಲಿ ಆದೇಶ ಹೊರಡಿಸಲಾಗಿದ್ದು, ಸದರಿ ಆದೇಶದಲ್ಲಿ ಈ ಕೆಳಕಂಡಂತೆ ಕೆನೆಪದರವನ್ನು ಅಳವಡಿಸಿಕೊಂಡು ಮೀಸಲಾತಿ ಪ್ರಮಾಣವನ್ನು ನಿಗದಿಪಡಿಸಲಾಗಿರುತ್ತದೆ.

No person other than scheduled caste/scheduled tribes and category-I of other backward classes shall be entitled to the benefit of reservation for the purpose of admission to professional courses if

1) either of whose parents/guardian is a class 1 or class II officer in the services of the Govt. or holds an equivalent posts in public sector undertaking or an employee under a private employer and draws a salary which is not less than that of class II officer.
2) either of whose parents/guardian is an income tax assessee/wealth tax assessee.
3) either of whose parents/guardian is assessed to sale tax.
4) either of whose parents/guardian or both together owns more than 8 hectares of rainfed or dry land or equivalent.

ಪ್ರವರ್ಗವಾರು ಮೀಸಲಾತಿ ಪ್ರಮಾಣ ಈ ಕೆಳಕಂಡಂತಿರುತ್ತದೆ.

| ಪ್ರವರ್ಗ | ಮೀಸಲಾತಿ ಪ್ರಮಾಣ (ಶೇಕಡವಾರು) |
|---|---|
| ಪ್ರವರ್ಗ -I | 4 % |
| ಪ್ರವರ್ಗ -II (ಎ) | 15 % |
| ಪ್ರವರ್ಗ -II (ಬಿ) | 4 % |
| ಪ್ರವರ್ಗ -III (ಎ) | 4 % |
| ಪ್ರವರ್ಗ -III (ಬಿ) | 5 % |
| ಒಟ್ಟು | 32% |

ಪ್ರೊ. ರವಿವರ್ಮ ಕುಮಾರ್ ನೇತೃತ್ವದ ಹಿಂದುಳಿದ ವರ್ಗಗಳ ಆಯೋಗವು ಸರ್ಕಾರಕ್ಕೆ ಸಲ್ಲಿಸಿದ ವಿಶೇಷ ವರದಿಯಲ್ಲಿನ ಹೊಸ ಕೆನೆಪದರ ನೀತಿ ಹಾಗೂ ಸಲಹೆಗಳ ವರದಿಯನ್ನಾಧರಿಸಿ ಕೆನೆಪದರ ನೀತಿಯು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳಿಗೆ ಮತ್ತು ಹಿಂದುಳಿದ ವರ್ಗಗಳ ಪ್ರವರ್ಗ-1 ಕ್ಕೆ ಅನ್ವಯಿಸುವುದಿಲ್ಲ ಎಂಬ ನಿಬಂಧನೆಗೆ ಒಳಪಟ್ಟು ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000 ದಿನಾಂಕ: 30.03.2002 ರನ್ವಯ ಹಿಂದುಳಿದ ವರ್ಗಗಳನ್ನು ಈ ಕೆಳಕಂಡಂತೆ ವರ್ಗೀಕರಿಸಿ ಮೀಸಲಾತಿ ಪ್ರಮಾಣವನ್ನು ನಿಗದಿಪಡಿಸಲಾಗಿರುತ್ತದೆ.

| ಪ್ರವರ್ಗ | ಮೀಸಲಾತಿ ಪ್ರಮಾಣ (ಶೇಕಡವಾರು) |
|---|---|
| ಪ್ರವರ್ಗ -I | 4 % |
| ಪ್ರವರ್ಗ -II (ಎ) | 15 % |
| ಪ್ರವರ್ಗ -II (ಬಿ) | 4 % |
| ಪ್ರವರ್ಗ -III (ಎ) | 4 % |
| ಪ್ರವರ್ಗ -III (ಬಿ) | 5 % |
| ಒಟ್ಟು | 32% |

ಪ್ರಸ್ತುತ ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000 ದಿನಾಂಕ: 30.03.2002ರ ಆದೇಶ ಜಾರಿಯಲ್ಲಿರುತ್ತದೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಎಲ್ಲಾ ಯೋಜನೆಗಳಿಗೆ ವಿಶೇಷವಾಗಿ ವಿದ್ಯಾರ್ಥಿಗಳಿಗೆ ನೀಡುವ ವಿದ್ಯಾರ್ಥಿ ವೇತನ, ಶುಲ್ಕ ಮರುಪಾವತಿ ಹಾಗೂ ವಿದ್ಯಾಸಿರಿ ಯೋಜನೆಗಳಿಗೆ ಪ್ರವರ್ಗ-1 ಕ್ಕೆ ಸೇರಿದ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ವರಮಾನದ ಮಿತಿಯನ್ನು ರೂ.2.50 ಲಕ್ಷಗಳಿಗೆ ನಿಗದಿಪಡಿಸಲಾಗಿದೆ ಉಳಿದ ಪ್ರವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಸದರಿ ವರಮಾನದ ಮಿತಿಯನ್ನು ರೂ.1.00 ಲಕ್ಷಗಳಿಗೆ ನಿಗದಿಗೊಳಿಸಲಾಗಿದೆ.

**ಸಂಖ್ಯೆ: ಹಿಂವಕ 342 ಬಿಸಿಎ 2024**

**(ಶಿವರಾಜ. ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.